KANNDA

# ಭಾರತದ ಸಂವಿಧಾನ

## ಪ್ರಸ್ತಾವನೆ

ಭಾರತದ ಜನಗಳಾದ ನಾವು ಭಾರತವನ್ನು ಒಂದು [1][ಸಾರ್ವಭೌಮ ಸಮಾಜವಾದೀ ಸರ್ವಧರ್ಮ ಸಮಭಾವದ ಪ್ರಜಾಸತ್ತಾತ್ಮಕ ಗಣರಾಜ್ಯವಾಗಿ] ರಚಿಸಲು ಮತ್ತು ಅದರ ಸಮಸ್ತ ನಾಗರಿಕರಿಗೆ:

ಸಾಮಾಜಿಕ, ಆರ್ಥಿಕ ಮತ್ತು ರಾಜಕೀಯ **ನ್ಯಾಯ** ;

ವಿಚಾರ, ಅಭಿವ್ಯಕ್ತಿ, ವಿಶ್ವಾಸ, ಧರ್ಮಶ್ರದ್ಧೆ ಮತ್ತು ಉಪಾಸನಾ **ಸ್ವಾತಂತ್ರ್ಯ** ;

ಸ್ಥಾನಮಾನ ಹಾಗೂ ಅವಕಾಶ **ಸಮಾನತೆ**

ದೊರೆಯುವಂತೆ ಮಾಡಲು ಮತ್ತು ವ್ಯಕ್ತಿ ಗೌರವವನ್ನು, [2][ರಾಷ್ಟ್ರದ ಏಕತೆಯನ್ನು ಹಾಗೂ ಅಖಂಡತೆಯನ್ನು] ಸುನಿಶ್ಚಿತಗೊಳಿಸಿ ಅವರಲ್ಲಿ ಭ್ರಾತೃಭಾವನೆಯನ್ನು ವೃದ್ಧಿಗೊಳಿಸಲು ಶ್ರದ್ಧಾಪೂರ್ವಕ ಸಂಕಲ್ಪ ಮಾಡಿದವರಾಗಿ;

ನಮ್ಮ ಸಂವಿಧಾನ ಸಭೆಯಲ್ಲಿ 1949ನೆಯ ಇಸವಿ ನವೆಂಬರ್ ತಿಂಗಳ ಇಪ್ಪತ್ತಾರನೆಯ ತಾರೀಖಾದ ಈ ದಿವಸ ಈ ಮೂಲಕ ಈ ಸಂವಿಧಾನವನ್ನು ಅಂಗೀಕರಿಸಿ, ಅಧಿನಿಯಮಿಸಿ ಅರ್ಪಿಸಿಕೊಂಡಿದ್ದೇವೆ.

---

1. 1976ನೇ ಇಸವಿಯ ಭಾರತ ಸಂವಿಧಾನ (ನಲವತ್ತೆರಡನೆಯ ತಿದ್ದುಪಡಿ) ಅಧಿನಿಯಮದ 2ನೇ ಪ್ರಕರಣದ ಮೇರೆಗೆ "ಸಂಪೂರ್ಣ ಪ್ರಭುತ್ವ ಸಂಪನ್ನ ಲೋಕತಂತ್ರಾತ್ಮಕ ಗಣರಾಜ್ಯವಾಗಿ" ಎಂಬ ಪದಗಳ ಬದಲಾಗಿ (3-1-1977ರಿಂದ ಜಾರಿಗೆ ಬರುವಂತೆ) ಪ್ರತ್ಯಾಯೋಜಿಸಲಾಗಿದೆ.
2. ಮೇಲ್ಕಂಡ ಅಧಿನಿಯಮದ 2ನೇ ಪ್ರಕರಣದ ಮೇರೆಗೆ "ರಾಷ್ಟ್ರದ ಏಕತೆಯನ್ನೂ" ಎಂಬ ಪದಗಳ ಬದಲಾಗಿ (3-1-1977ರಿಂದ ಜಾರಿಗೆ ಬರುವಂತೆ) ಪ್ರತ್ಯಾಯೋಜಿಸಲಾಗಿದೆ.